ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

## ಯುಜಿನೀಟ್ –2021 ಅಣುಕು ಸೀಟು ಹಂಚಿಕೆ
## ವೈದ್ಯಕೀಯ / ದಂತವೈದ್ಯಕೀಯ / ಆಯುಷ್ ಕೋರ್ಸುಗಳಿಗೆ

**ದಿನಾಂಕ: 04–02–2022**

- ಯುಜಿನೀಟ್ – 2021ರ ವೈದ್ಯಕೀಯ / ದಂತವೈದ್ಯಕೀಯ / ಆಯುಷ್ ಕೋರ್ಸುಗಳ ಪ್ರವೇಶಕ್ಕಾಗಿ, ಅರ್ಹ ಅಭ್ಯರ್ಥಿಗಳು ದಾಖಲಿಸಿರುವ ಇಚ್ಛೆ / ಆಯ್ಕೆಗಳನ್ನು ದಾಖಲಿಸಿ ಮೆರಿಟ್ ಮತ್ತು ರೋಸ್ಟರ್ ಪದ್ಧತಿ ಆಧಾರದ ಮೇಲೆ ಅಣುಕು ಸೀಟು ಹಂಚಿಕೆಯನ್ನು ಮಾಡಿ ಫಲಿತಾಂಶವನ್ನು ದಿನಾಂಕ 04–02–2022 ರಂದು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.
- ಅಭ್ಯರ್ಥಿಗಳು ಅಣಕು ಫಲಿಂತಾಂಶವನ್ನು ಪರಿಶೀಲಿಸಿದ ನಂತರ ಇಚ್ಛೆ / ಆಯ್ಕೆಗಳನ್ನು ಅವಶ್ಯವಿದ್ದಲ್ಲಿ ಬದಲಾಯಿಸಬಹುದಾಗಿದೆ / ಸೇರಿಸಬಹುದಾಗಿದೆ / ಅಳಿಸಬಹುದಾಗಿದೆ. ನಿಗದಿತ ದಿನಾಂಕ ಮತ್ತು ಸಮಯದ ನಂತರ ಬದಲಾವಣೆಗಳನ್ನು ಮಾಡಲು ಅವಕಾಶವಿರುವುದಿಲ್ಲ.
- ಮೊದಲನೇ ಸುತ್ತಿಗೆ ಇಚ್ಛೆ / ಆಯ್ಕೆಗಳನ್ನು ದಾಖಲಿಸದೇ ಇರುವ ಅರ್ಹ ಅಭ್ಯರ್ಥಿಯೂ ಸಹ ಇಷ್ಟವಿದ್ದಲ್ಲಿ ಇಚ್ಛೆ / ಆಯ್ಕೆಗಳನ್ನು ಆದ್ಯತಾ ಕ್ರಮದಲ್ಲಿ ಅಣಕು ಸೀಟು ಹಂಚಿಕೆಯ ಫಲಿತಾಂಶದ ನಂತರವೂ ದಾಖಲಿಸಬಹುದಾಗಿರುತ್ತದೆ.
- ಅಣಕು ಸೀಟು ಹಂಚಿಕೆಯ ನಂತರ ಅಭ್ಯರ್ಥಿಗಳು ಬದಲಾಯಿಸುವ / ಮಾರ್ಪಡಿಸಿ ಅಂತಿಮವಾಗಿ ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ಮೊದಲನೇ ಸುತ್ತಿನ ನೈಜ ಸೀಟು ಹಂಚಿಕೆಯನ್ನು ಮಾಡಿ ಫಲಿತಾಂಶವನ್ನು ಪ್ರಕಟಿಸಲಾಗುವುದು.
- ಅಣಕು ಸೀಟು ಹಂಚಿಕೆಯ ನಂತರ ಅಭ್ಯರ್ಥಿಗಳು ಬದಲಾಯಿಸುವ / ಮಾರ್ಪಡಿಸಿ ಅಂತಿಮವಾಗಿ ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆ ಮಾಡುವುದರಿಂದ, ಅಣುಕು ಸೀಟು ಹಂಚಿಕೆಯಲ್ಲಿ ದೊರೆತ ಸೀಟೇ ನೈಜ ಸೀಟು ಹಂಚಿಕೆಯಲ್ಲಿ ದೊರಕಬಹುದು ಅಥವಾ ದೊರಕದೇ ಇರುಬಹುದು.
- ಅಣಕು ಸೀಟು ಹಂಚಿಕೆಯು ಅಭ್ಯರ್ಥಿಗಳಿಗೆ ಕೇವಲ ಸೀಟು ಹಂಚಿಕೆಯ ಬಗ್ಗೆ ಮಾಹಿತಿ ನೀಡುವುದಷ್ಟೇ ಆಗಿದ್ದು, ಅಣಕು ಸೀಟು ಹಂಚಿಕೆಯಲ್ಲಿ ಸಿಗುವ ಸೀಟೇ ನೈಜ ಸೀಟು ಹಂಚಿಕೆಯಲ್ಲಿ ದೊರಕುತ್ತದೆ ಎಂದು ಖಚಿತಪಡಿಸಿಕೊಳ್ಳುವಂತಿಲ್ಲ.
- ಅಣಕು ಸೀಟು ಹಂಚಿಕೆಯ ಫಲಿತಾಂಶದ ಜೊತೆಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಕಟ್ ಆಫ್ ರ್‍ಯಾಂಕ್ ಅನ್ನೂ ಸಹ ಪ್ರಕಟಿಸಲಾಗಿರುತ್ತದೆ. ಅಭ್ಯರ್ಥಿಗಳು ತಾವು ದಾಖಲಿಸಿರುವ ಇಚ್ಛೆ / ಆಯ್ಕೆಗಳ ಆದ್ಯತಾ ಕ್ರಮಗಳನ್ನು ಪರಿಶೀಲಿಸಿಕೊಳ್ಳಬಹುದಾಗಿದೆ.
- ಅಣಕು ಸೀಟು ಹಂಚಿಕೆಯಲ್ಲಿ ಯಾವುದೇ ಸೀಟು ಹಂಚಿಕೆಯಾಗದ ಅಭ್ಯರ್ಥಿಗಳು ತಾವು ದಾಖಲಿಸಿರುವ ಇಚ್ಛೆ / ಆಯ್ಕೆಗಳ ಆದ್ಯತಾ ಕ್ರಮಗಳನ್ನು ಪರಿಶೀಲಿಸಿ, ಇಷ್ಟವಿದ್ದಲ್ಲಿ ಇನ್ನೂ ಹೆಚ್ಚಿನ ಇಚ್ಛೆ / ಆಯ್ಕೆಗಳನ್ನು ಆದ್ಯತಾ ಕ್ರಮದಲ್ಲಿ ನೀಡಬಹುದು.
- ಅಣುಕು ಸೀಟು ಹಂಚಿಕೆಯ ಫಲಿತಾಂಶದ ಆಧಾರದ ಮೇಲೆ ಅಭ್ಯರ್ಥಿಗಳು ಕಾಲೇಜಿನಲ್ಲಿ ಪ್ರವೇಶ ಪಡೆಯುವಂತಿಲ್ಲ.
- ಸೀಟು ಹಂಚಿಕೆಯು, ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸಂಪೂರ್ಣವಾಗಿ ಅಭ್ಯರ್ಥಿಗಳು ಆದ್ಯತಾ ಕ್ರಮದಲ್ಲಿ ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಅವಲಂಬಿಸಿರುತ್ತದೆ.

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in